ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 74(723)
2) ಸದಸ್ಯರ ಹೆಸರು : ಶ್ರೀ ಕೆ. ಗೋವಿಂದರಾಜ್
(ವಿಧಾನ ಸಭೆಯಿಂದ ಚುನಾಯಿತರಾದವರು)
3) ಉತ್ತರಿಸುವ ದಿನಾಂಕ : 14.12.2018
4) ಉತ್ತರಿಸುವವರು : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ರಾಜಕಾಲುವೆಯ ನೀರನ್ನು ನೇರವಾಗಿ ಮಡಿವಾಳ ಕೆರೆಗೆ ಹರಿಸಿದ ಪರಿಣಾಮವಾಗಿ ಕೆರೆಯ ದಡದಲ್ಲಿ ಶಂಕದ ಹುಳು, ಕಪ್ಪೆಚಿಪ್ಪು, ಸತ್ತ ಮೀನುಗಳ ರಾಶಿ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು.
ಆ)	ಮಡಿವಾಳ ಕೆರೆಯ ದುರ್ವಾಸನೆಯಿಂದ ಸಾರ್ವಜನಿಕರು ಗಾಬರಿಗೊಂಡಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿರುವುದೇ;	ಹೌದು. ಪ್ರಕೃತಿ ವಿಕೋಪದಿಂದ ಹೆಚ್ಚಿನ ಪ್ರಮಾಣದಲ್ಲಿ ಮಳೆ ಸುರಿದ ಕಾರಣ ಒಳಚರಂಡಿ ಮುಖಾಂತರ ಕೊಳಚೆ ನೀರು ಸರಾಗವಾಗಿ ಹರಿಯದೆ ಮಳೆ ನೀರಿನೊಂದಿಗೆ ಬೆರೆತು ರಾಜಕಾಲುವೆಯ ಮುಖಾಂತರ ಮಡಿವಾಳ ಕೆರೆಗೆ ಸೇರಿದ ಸಂದರ್ಭದಲ್ಲಿ ಮಾತ್ರ ತಾತ್ಕಾಲಿಕವಾಗಿ ಸಾರ್ವಜನಿಕರಿಗೆ ತೊಂದರೆ ಉಂಟಾಗಿರುತ್ತದೆ. ಬೆಂಗಳೂರು ಜಲಮಂಡಳಿಯ ವತಿಯಿಂದ ಮಡಿವಾಳ ಕೆರೆಗೆ ತ್ಯಾಜ್ಯನೀರು ನೇರವಾಗಿ ಹರಿಯುವುದನ್ನು ತಪ್ಪಿಸಲು 1998ರಲ್ಲಿ 4 ದಶಲಕ್ಷ ಲೀಟರ್ ದಿನಂಪ್ರತಿ ಸಾಮರ್ಥ್ಯದ ಒಂದು ತ್ಯಾಜ್ಯನೀರು ಶುದ್ಧೀಕರಣ ಘಟಕವನ್ನು ರೂ.2.00 ಕೋಟಿ ವೆಚ್ಚದಲ್ಲಿ ನಿರ್ಮಿಸಲಾಗಿರುತ್ತದೆ. ಸದರಿ ಘಟಕದಲ್ಲಿ ಶುದ್ಧೀಕರಣಗೊಳ್ಳುವ ನೀರನ್ನು ಮಡಿವಾಳ ಕೆರೆಗೆ ಹರಿಸಿ, ಕೆರೆಯ ಸಂರಕ್ಷಣೆಯನ್ನು ಮಾಡಲಾಗುತ್ತಿತ್ತು. ಆದರೆ, ತ್ಯಾಜ್ಯನೀರಿನ ಶುದ್ಧೀಕರಣ ಘಟಕದಲ್ಲಿ ಕೆಲವು ಪುನರುಜ್ಜೀವನ ಕಾಮಗಾರಿಗಳನ್ನು ಕೈಗೊಳ್ಳಬೇಕಾದ ಕಾರಣ, ಸದರಿ ಘಟಕವನ್ನು ಕರ್ನಾಟಕ ಕೆರೆ ಸಂರಕ್ಷಣೆ ಹಾಗೂ ಅಭಿವೃದ್ಧಿ ಪ್ರಾಧಿಕಾರದವರಿಗೆ 2017ನೇ ಸಾಲಿನಲ್ಲಿ ಹಸ್ತಾಂತರಿಸಲಾಗಿರುತ್ತದೆ. ಅದರಂತೆ, ಪ್ರಾಧಿಕಾರದ ವತಿಯಿಂದ ರೂ.24.72 ಕೋಟಿ ವೆಚ್ಚದಲ್ಲಿ ಮಡಿವಾಳ ಕೆರೆ ಹಾಗೂ ನೀರು ಶುದ್ಧೀಕರಣ ಘಟಕವನ್ನು ಆಧುನಿಕವಾಗಿ ಅಭಿವೃದ್ಧಿಗೊಳಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ. ಸದರಿ ಯೋಜನೆಯಲ್ಲಿ ಹಾಲಿ ಶುದ್ಧೀಕರಣದ ಘಟಕವನ್ನು ಉನ್ನತೀಕರಿಸುವ ಕಾಮಗಾರಿಗೆ ರೂ.13.17 ಕೋಟಿ ಮೊತ್ತ ನಿಗದಿಪಡಿಸಲಾಗಿದ್ದು, ಯೋಜನೆಯಲ್ಲಿ ಶೇ.20ರಷ್ಟು ಭೌತಿಕ ಪ್ರಗತಿ ಸಾಧಿಸಲಾಗಿರುತ್ತದೆ. ತದನಂತರ, ಸದರಿ ನೀರಿನ ಶುದ್ಧೀಕರಣ ಘಟಕವನ್ನು ಜಲಮಂಡಳಿಗೆ ಹಸ್ತಾಂತರಿಸಲಾಗಿದ್ದು, ಪ್ರಸ್ತುತ ಜಲಮಂಡಳಿಯು ಘಟಕದ ಕಾಮಗಾರಿಯ ಮೇಲ್ವಿಚಾರಣೆ ಮಾಡುತ್ತಿದೆ.

ಇ)	ಕೆರೆಗಳನ್ನು ಉಳಿಸಿ ಮೆಟ್ರೋ ನಗರದ ಸೌಂದರ್ಯ ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ಮಡಿವಾಳ ಕೆರೆಯಲ್ಲಿ ಕರ್ನಾಟಕ ಸರೋವರ ಸಂರಕ್ಷಣಾ ಮತ್ತು ಅಭಿವೃದ್ಧಿ ಪ್ರಾಧಿಕಾರವು 2017-18ನೇ ಸಾಲಿನಲ್ಲಿ ಜೀವವೈವಿಧ್ಯ ಉದ್ಯಾನವನ ರಚನೆ, ಸೈಕ್ಯಾಡೇರಿಯಂ, ಚಿಟ್ಟೆವನ, ವಾಹನಗ ನಿಲ್ದಾಣ, ಗೇಟಿನ ನಿರ್ಮಾಣ ಇತ್ಯಾದಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಿರುತ್ತದೆ. ಪ್ರವಾಸಿಗರ/ ಸಾರ್ವಜನಿಕರ ಉಪಯೋಗಕ್ಕಾಗಿ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಿದ್ದು, ಸಾರ್ವಜನಿಕರ ಮನರಂಜನೆಗಾಗಿ ದೋಣಿವಿಹಾರ ನಡೆಸಲಾಗುತ್ತಿದೆ. ಬೃಹತ್ ಬೆಂಗಳೂರು ಮಹಾನಗರಪಾಲಿಕೆ ವಶದಲ್ಲಿ 148 ಜೀವಂತ ಕೆರೆಗಳು ಇದ್ದು, ಇದುವರೆವಿಗೂ 65 ಕೆರೆಗಳನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಿ ಸಾರ್ವಜನಿಕರ ಉಪಯೋಗಕ್ಕಾಗಿ ತೆರೆದಿಡಲಾಗಿದೆ. 27 ಕೆರೆಗಳ ಅಭಿವೃದ್ಧಿ ಕೆಲಸಗಳು ಪ್ರಗತಿಯಲ್ಲಿದ್ದು, ಈ ಕಾಮಗಾರಿಗಳನ್ನು ಮಾರ್ಚ್ 2019ರ ಅಂತ್ಯಕ್ಕೆ ಪೂರ್ಣಗೊಳಿಸಲಾಗುವುದು. ಇನ್ನುಳಿದ 56 ಕೆರೆಗಳನ್ನು ಅಭಿವೃದ್ಧಿಗೊಳಿಸಲು ಕ್ರಮಕೈಗೊಳ್ಳಲಾಗುತ್ತಿರುತ್ತದೆ. ತ್ಯಾಜ್ಯನೀರು ಹಾಗೂ ಮಳೆನೀರು ಕಾಲುವೆಗಳಲ್ಲಿ ಹರಿದು ಸುತ್ತಮುತ್ತಲ ಕೆರೆಗಳಿಗೆ ಸೇರುತ್ತಿರುವುದನ್ನು ತಪ್ಪಿಸಲು ಬೆಂಗಳೂರು ಜಲಮಂಡಳಿಯ ವತಿಯಿಂದ ಚಿಕ್ಕಮಟ್ಟ ಕೊಳವೆ ಮಾರ್ಗಗಳ ಕಾಮಗಾರಿಗಳನ್ನು ಹಂತ ಹಂತವಾಗಿ ಕೈಗೊಳ್ಳುತ್ತಿದ್ದು, ಹೆಚ್ಚಿನ ಮೊತ್ತದ ಕಾಮಗಾರಿಗಳಿಗೆ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದಿಂದ ಅನುದಾನ ಪಡೆದು ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದೆ. ಕೆಲವು ಹೆಚ್ಚಿನ ಮೊತ್ತದ ಕಾಮಗಾರಿಗಳಿಗೆ ಹಣಕಾಸು ಸಂಸ್ಥೆಗಳಿಂದ ಸಾಲರೂಪದ ಹಣವನ್ನು ಪಡೆದು ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದೆ. ಬೆಂಗಳೂರು ಜಲಮಂಡಳಿಯು ಮೆಗಾಸಿಟಿ ರಿವಾಲ್ವಿಂಗ್ ನಿಧಿಯಡಿ ಒಟ್ಟು 440 ದಶಲಕ್ಷ ಲೀಟರ್ ದಿನಂಪ್ರತಿ ಸಾಮರ್ಥ್ಯದ 4 ಹೊಸ ತ್ಯಾಜ್ಯನೀರಿನ ಸಂಸ್ಕರಣ ಘಟಕಗಳ ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು, ಸದರಿ ಯೋಜನೆಗಳಿಗೆ ಶೇ.50ರಷ್ಟು ಹಣವನ್ನು ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ಸಂಸ್ಥೆಯಿಂದ ಸಾಲದ ರೂಪದಲ್ಲಿ ಪಡೆಯಲಾಗುವುದು ಮತ್ತು ರಾಜ್ಯ ಸರ್ಕಾರದಿಂದ ಶೇ.25ರಷ್ಟು ಅನುದಾನವನ್ನು ಹಾಗೂ ಉಳಿದ ಶೇ.25ರಷ್ಟು ಹಣವನ್ನು ಜಲಮಂಡಲಿಯಿಂದ ಭರಿಸಲಾಗುತ್ತಿದೆ. ಈ ಯೋಜನೆಗಳನ್ನು 2020ರ ಅಂತ್ಯದೊಳಗೆ ಪೂರ್ಣ ಮಾಡಲಾಗುವುದು. ಅಮೃತ್ ಯೋಜನೆಯಡಿಯಲ್ಲಿ 5 ಸಣ್ಣ ಪ್ರಮಾಣದ ತ್ಯಾಜ್ಯನೀರು ಸಂಸ್ಕರಣಾ ಘಟಕಗಳ ಕಾಮಗಾರಿಗಳನ್ನು ಕೈಕೊಳ್ಳಲಾಗಿದೆ. ಸದರಿ ಕಾಮಗಾರಿಗಳು ಪ್ರಗತಿಯಲ್ಲಿದ್ದು, 2019ರ ಅಂತ್ಯದಲ್ಲಿ ಪೂರ್ಣಗೊಳಿಸಲು ಯೋಜಿಸಲಾಗಿದೆ.

ಸಂಖ್ಯೆ: ಅಪಜೀ 58 ಎಫ್‌ಟಿಎಸ್ 2018

(ಆರ್. ಶಂಕರ್)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು